ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೦

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**ಶುಕ್ರವಾರ, ದಿನಾಂಕ: ೧೦ನೇ ಜುಲೈ, ೨೦೧೫**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು
೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು
೩. ವಸತಿ ಸಚಿವರು
೪. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು
೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು
೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಹೈದರಾಬಾದ್–ಕರ್ನಾಟಕ ಭಾಗದಲ್ಲಿ ಅನುದಾನ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೩೬ (೧೫೫೩) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದರಾಬಾದ್–ಕರ್ನಾಟಕ ಭಾಗದಲ್ಲಿ ಅನುದಾನಿತ ಕಾಲೇಜುಗಳಲ್ಲಿ ನೇಮಕಾತಿ ಹಾಗೂ ಬಡ್ತಿ ನೀಡದೆ ನಿರ್ಲಕ್ಷಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ೩೭೧ (ಜೆ) ಅಡಿ ಈ ಭಾಗದ ಖಾಲಿ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಯಾವುದೇ ರೀತಿಯ ಅಡೆ ತಡೆ ಇರುವುದಿಲ್ಲವಾದ್ದರಿಂದ ಸರ್ಕಾರ ಈ ಖಾಲಿ ಹುದ್ದೆಗಳನ್ನು ತುಂಬಲು ಅತಿ ಶೀಘ್ರವಾಗಿ ಕೈಗೊಂಡಿರುವ ಕ್ರಮಗಳೇನು ;

(ಇ) ಹೈದರಾಬಾದ್–ಕರ್ನಾಟಕ ಭಾಗದ ಅನುದಾನಿತ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಬೋಧಕೇತರ ಹುದ್ದೆಗಳೆಷ್ಟು ಹಾಗೂ ಖಾಲಿ ಇರುವ ಹುದ್ದೆಗಳು ಮತ್ತು ಅನುಕಂಪ ಆಧಾರದ ಮೇಲೆ ನೇಮಕವಾಗದೆ ಇರುವ ಹುದ್ದೆಗಳೇಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಸ್ಥಳೀಯ ಸಂಸ್ಥೆಗಳು ಲೈಬ್ರರಿ ಸೆಸ್ ಸಂಗ್ರಹಿಸುವ ಕುರಿತು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩೭ (೧೧೬೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರದ ನಿರ್ವಹಣೆಯಲ್ಲಿರುವ ವಾಚನಾಲಯಗಳು ಎಷ್ಟು ; (ಜಿಲ್ಲಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಗ್ರಂಥಾಲಯ ಇಲಾಖೆಗೆ ಪುಸ್ತಕ, ವೃತ್ತಪತ್ರಿಕೆ ಸೇರಿದಂತೆ ಖರೀದಿಗಾಗಿ ಒದಗಿಸಲಾದ ಅನುದಾನ ಎಷ್ಟು ; ವರ್ಷವಾರು ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಇ) ಸ್ಥಳೀಯ ಸಂಸ್ಥೆಗಳು, ಪಾಲಿಕೆಗಳು ಜನರಿಗೆ ಗ್ರಂಥಾಲಯ ಸೌಲಭ್ಯ ಒದಗಿಸುವ ಉದ್ದೇಶದಿಂದ ಲೈಬ್ರರಿ ಸೆಸ್ ಸಂಗ್ರಹಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಕಳೆದ ೩ ವರ್ಷಗಳ ಅವಧಿಯಲ್ಲಿ ಸ್ಥಳೀಯ ಸಂಸ್ಥೆಗಳು ಸಂಗ್ರಹಿಸಿದ ಸೆಸ್ ಗ್ರಂಥಾಲಯ ಇಲಾಖೆಗೆ ಪಾವತಿಸಿದ ಹಣ ಎಷ್ಟು ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಈ) ಸ್ಥಳೀಯ ಸಂಸ್ಥೆಗಳು ಲೈಬ್ರರಿ ಸೆಸ್ ಸಂಗ್ರಹಿಸಿದರೂ ಗ್ರಂಥಾಲಯ ಇಲಾಖೆಗೆ ಪಾವತಿಸದೇ ಇರುವ, ವಿಳಂಬ ನೀತಿಯಿಂದಾಗಿ ಗ್ರಂಥಾಲಯಗಳ ಸ್ಥಿತಿ ಉತ್ತಮವಾಗದಿರುವ ವಿಷಯವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ?

## ಬೆಳಗಾವಿ ದಕ್ಷಿಣಕ್ಕೆ ಸರ್ಕಾರಿ ಪದವಿ ಕಾಲೇಜು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೧೩೮ (೧೧೮೨) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿಯ ದಕ್ಷಿಣಭಾಗದಲ್ಲಿ ಸರ್ಕಾರಿ ಪದವಿ ಕಾಲೇಜುಗಳು ಇಲ್ಲದಿರುವುದು ಮತ್ತು ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸರ್ಕಾರಿ ಪದವಿ ಕಾಲೇಜು ಮಂಜೂರಾತಿಗಾಗಿ ಬೇಡಿಕೆ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಥವಾ ಬಾರದಿದ್ದಲ್ಲಿ, ಈ ಭಾಗದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಜರೂರಾಗಿ ಸರ್ಕಾರಿ ಪದವಿ ಕಾಲೇಜು ಸ್ಥಾಪನೆಗೆ ಸರ್ಕಾರ ಮಂಜೂರಾತಿ ನೀಡುವುದೇ ?

## ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರಿಗೆ ಹಾಗೂ ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿ ನೀಡುವ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೩೯ (೧೫೩೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನುದಾನಿತ ಶಾಲಾ–ಕಾಲೇಜುಗಳ ಶಿಕ್ಷಕರಿಗೆ ಹಾಗೂ ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿ ನೀಡುವಂತೆ ಮಾನ್ಯ ಉಚ್ಚ ನ್ಯಾಯಾಲಯ ಹಾಗೂ ಸರ್ವೋಚ್ಚ ನ್ಯಾಯಾಲಯದ ಆದೇಶವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಕಾಲ್ಪನಿಕ ವೇತನ ಬಡ್ತಿ ನೀಡುವಲ್ಲಿ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣಗಳೇನು ?

## ದಕ್ಷಿಣ ಕನ್ನಡ ಜಿಲ್ಲೆಯ ವಾರ್ತಾಧಿಕಾರಿಗೆ ವಾಹನವನ್ನು ನೀಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೪೦ (೧೫೩೮) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಕ್ಷಿಣ ಕನ್ನಡ ಜಿಲ್ಲೆಯ ವಾರ್ತಾಧಿಕಾರಿಗೆ ವಾಹನವನ್ನು ನೀಡಬೇಕೆಂಬ ಪ್ರಸ್ತಾವನೆ ನೀಡಿದ್ದರೂ ಇಲಾಖೆ ಪರಿಗಣಿಸದೆ ಇರಲು ಕಾರಣಗಳೇನು ;

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳ ವಾರ್ತಾಧಿಕಾರಿಗಳಿಗೆ ವಾಹನ ಒದಗಿಸಲಾಗಿದೆ ;

(ಇ) ರಾಜ್ಯದ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರಿಗೆ ಬಸ್ ಪಾಸ್ ಮತ್ತು ಆರೋಗ್ಯ ವಿಮೆ ಯೋಜನೆ ವಿಸ್ತರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ ;

(ಈ) ಗ್ರಾಮಾಂತರ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರ ಮೇಲೆ ಕರ್ತವ್ಯದಲ್ಲಿದ್ದ ಸಮಯದಲ್ಲಿ ಹಲ್ಲೆ ನಡೆದ ಪ್ರಕರಣಗಳೆಷ್ಟು ; ಈ ಬಗ್ಗೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಗ್ರಾಮಾಂತರ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರಿಗೆ ಮಾನ್ಯತೆ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಶುದ್ಧ ಕುಡಿಯುವ ನೀರಿನ ಘಟಕದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೪೧ (೧೫೫೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೨ ವರ್ಷದಲ್ಲಿ ರಾಜ್ಯದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಎಲ್ಲೆಲ್ಲಿ ಸ್ಥಾಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದ್ದಲ್ಲಿ, ಆ ಯೋಜನೆಯ ರೂಪರೇಷೆಗಳೇನು ;

(ಇ) ೨೦೧೪–೧೫ನೇ ಸಾಲಿನಲ್ಲಿ ತುರುವೇಕೆರೆ ಕ್ಷೇತ್ರಕ್ಕೆ ಎಷ್ಟು ಘಟಕಗಳನ್ನು ಮಂಜೂರು ಮಾಡಲಾಗಿದೆ ; ೨೦೧೫–೧೬ನೇ ಸಾಲಿನಲ್ಲಿ ಯಾವ ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಲಾಗಿದೆ ?

## ಬೀದರ್ ಜಿಲ್ಲೆಗೆ ೧೩ನೇ ಹಣಕಾಸಿನ ಯೋಜನೆಯಡಿಲ್ಲಿ ಬಿಡುಗಡೆಯಾದ ಅನುದಾನ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೪೨ (೧೧೬೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಗೆ ೧೩ನೇ ಹಣಕಾಸು ಯೋಜನೆಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಅನುದಾನದ ಕ್ರಿಯಾಯೋಜನೆಯಡಿ ಕೈಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮ ಪಂಚಾಯತಿಗಳವಾರು ಕಾಮಗಾರಿವಾರು ಮಾಹಿತಿ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ತಗುಲಿದ ವೆಚ್ಚ ಎಷ್ಟು ; ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ; ಮುಕ್ತಾಯಗೊಂಡಿದ್ದಲ್ಲಿ ಯಾವಾಗ ? (ಕಾಮಗಾರಿವಾರು, ಗುತ್ತಿಗೆದಾರರ ಹೆಸರು ಹಾಗೂ ವಿವರ ಒದಗಿಸುವುದು)

## ಗ್ರಾಮ ಪಂಚಾಯಿತಿಯ ಚುನಾಯಿತ ಪ್ರತಿನಿಧಿಗಳ ಗೌರವಧನದ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೩ (೧೨೪೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೦–೧೧ನೇ ಸಾಲಿನಿಂದ ೨೦೧೪–೧೫ನೇ ಸಾಲಿನವರೆಗೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳ ಗೌರವಧನದ ಪಾವತಿಸಲಾಗಿದೆಯೇ ;

(ಆ) ಪಾವತಿಸದೇ ಇದ್ದಲ್ಲಿ, ಪಾವತಿಸಬೇಕಾದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಸದಸ್ಯರಿಗೆ ಗೌರವಧನ ಪಾವತಿಸದಿರಲು ಮತ್ತು ಸರ್ಕಾರದಿಂದ ಹಣ ಬಿಡುಗಡೆ ಮಾಡದಿರಲು ಕಾರಣಗಳೇನು ;

(ಈ) ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಿಯುಸಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯ ಹಾಗೂ ಮೌಲ್ಯಮಾಪನದಲ್ಲಿ ಉಂಟಾಗಿರುವ ಲೋಪ–ದೋಷಗಳ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೪೪ (೧೧೫೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಇತ್ತೀಚೆಗೆ ಪಿಯುಸಿ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸಿದ್ಧಪಡಿಸುವಲ್ಲಿ ಮತ್ತು ಮೌಲ್ಯಮಾಪನಗಳಲ್ಲಿ ಉಂಟಾದ ದೋಷಗಳು ಮುಂದಿನ ದಿನಗಳಲ್ಲಿ ಮರುಕಳಿಸದಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಪ್ರಸ್ತುತ ವರ್ಷದಲ್ಲಿ ಉಂಟಾದ ಲೋಪದೋಷಗಳ ಬಗ್ಗೆ ಯಾವ್ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಲಭ್ಯದ ಕೊರತೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರು (ಪದವೀಧರರ ಕ್ಷೇತ್ರ) –**

೧೪೫ (೧೫೨೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ನಗರಗಳಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜುಗಳಿಗೆ ಬೋಧನಾ ಕೊಠಡಿ, ಪ್ರಯೋಗಾಲಯ ಕೊಠಡಿ ಇತ್ಯಾದಿ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರಿ ಪದವಿ ಪೂರ್ವ ಕಾಲೇಜು ಲಕ್ಷ್ಮೇಶ್ವರಕ್ಕೆ ಹೆಚ್ಚಿನ ಕೊಠಡಿ ಮತ್ತು ಶೌಚಾಲಯ ನಿರ್ಮಿಸಲು ಸರ್ಕಾರ ಅನುದಾನ ಬಿಡುಗಡೆ ಮಾಡಿದೆಯೇ ; ಮಾಡಿದ್ದಲ್ಲಿ, ಎಷ್ಟು ; ಯಾವಾಗ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಸರ್ಕಾರಿ ಪದವಿ ಪೂರ್ವ ಕಾಲೇಜು, ಶಿರಹಟ್ಟಿ, ಪ್ರಾರಂಭಗೊಂಡಿದ್ದು ಯಾವಾಗ;

(ಈ) ಈ ಕಾಲೇಜಿನಲ್ಲಿ ಕಳೆದ ೩ ವರ್ಷಗಳಿಂದ ಕಲಾ ವಾಣಿಜ್ಯ ಹಾಗೂ ವಿಜ್ಞಾನ ವಿಭಾಗಗಳಲ್ಲಿ ಪ್ರಥಮ ಹಾಗೂ ದ್ವಿತೀಯ ವರ್ಷದಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಉ) ಈ ಕಾಲೇಜು ಸ್ವಂತ ಕಟ್ಟಡ ಹೊಂದಿದೆಯೇ ; ಹೊಂದಿದ್ದಲ್ಲಿ, ಎಷ್ಟು ಬೋಧನಾ ಕೊಠಡಿಗಳು ಮತ್ತು ಪ್ರಯೋಗಾಲಯಗಳು ಮತ್ತು ಇನ್ನಿತರೆ ಮೂಲಭೂತ ಸೌಲಭ್ಯಗಳನ್ನು ಹೊಂದಿದೆ ; (ವಿವರ ನೀಡುವುದು)

(ಊ) ಒಂದು ವೇಳೆ ಕೊಠಡಿಗಳ ಕೊರತೆ ಇದ್ದಲ್ಲಿ, ಇದನ್ನು ಯಾವಾಗ ಸರಿಪಡಿಸಲಾಗುತ್ತದೆ ?

## ರಾಜ್ಯದಲ್ಲಿನ ಅಂಗನವಾಡಿ ಕಾರ್ಯಕರ್ತೆಯರ ಬಗ್ಗೆ

**ಶ್ರೀ ಸೋಮಣ್ಣ ವಿ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)**\–

೧೪೬ (೧೧೬೪) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು ; ಅಂಗನವಾಡಿ ಕಾರ್ಯಕರ್ತೆಯರನ್ನು ಖಾಯಂಗೊಳಿಸುವ ವಿಚಾರ ಸರ್ಕಾರದ ಮುಂದಿದೆಯೇ;

(ಆ) ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ಮಾಸಿಕ ವೇತನ ಎಷ್ಟು; ವೇತನವನ್ನು ಹೆಚ್ಚಳ ಮಾಡಲಾಗುವುದೇ ;

(ಇ) ಅಂಗನವಾಡಿ ಕಾರ್ಯಕರ್ತೆಯರಿಗೆ ಕಳಪೆ ಮಟ್ಟದ ಬಟ್ಟೆಗಳನ್ನು ವಿತರಿಸಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ? (ಮಾಹಿತಿ ಒದಗಿಸುವುದು)

## ಕಾಲ್ಪನಿಕ ವೇತನ ಬಡ್ತಿ ಸಮಸ್ಯೆಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೪೭ (೧೫೧೬) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನುದಾನ ರಹಿತ ಸೇವೆಯನ್ನು ಪರಿಗಣಿಸುವ ಕುರಿತು (ಕಾಲ್ಪನಿಕ ವೇತನ ಬಡ್ತಿ) ಸಮಸ್ಯೆ ಪರಿಹಾಕ್ಕೆ ಸಮಿತಿ ನೀಡಿರುವ ವರದಿಯ ಕುರಿತು ಸರ್ಕಾರದ ನಿಲುವೇನು ;

(ಆ) ವರದಿಯ ಪ್ರತಿ ಶಿಫಾರಸ್ಸುಗಳ ಕುರಿತು ಸರ್ಕಾರದ ಕ್ರಮವೇನು ;

(ಇ) ಯಾವ ಸಮಯದ ಮಿತಿಯೊಳಗೆ ಈ ಸಮಸ್ಯೆಯನ್ನು ಬಗೆಹರಿಸಲಾಗುವುದು?

## ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರುಗಳ ನೂತನ ಪಿಂಚಣಿ ಯೋಜನೆ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೪೪ (೧೧೭೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಿ: ೧–೪–೨೦೦೬ರ ನಂತರ ರಾಜ್ಯದಲ್ಲಿ ನೂತನ ಪಿಂಚಣಿ ಯೋಜನೆ ಜಾರಿಗೆ ಬಂದ ನಂತರ ನೇಮಕವಾದ ಹಾಗೂ ಅನುದಾನಕ್ಕೆ ಒಳಪಟ್ಟ ಒಟ್ಟು ಸಿಬ್ಬಂದಿ ಎಷ್ಟು ; (ಜಿಲ್ಲಾವಾರು, ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳ ಮಾಹಿತಿ ಒದಗಿಸುವುದು)

(ಆ) ಈ ಸಿಬ್ಬಂದಿಗಳಿಗೆ ನೂತನ ಪಿಂಚಣಿ ಯೋಜನೆ ಜಾರಿಗೊಳಿಸಲಾಗಿದೆಯೇ;

(ಇ) ಹಾಗಿದ್ದಲ್ಲಿ, ರಾಜ್ಯದಲ್ಲಿ ಎಷ್ಟು ಆಡಳಿತ ಮಂಡಳಿಗಳು ತಮ್ಮ ಪಾಲಿನ ವಂತಿಗೆಯನ್ನು ಭರಿಸಲು ವಿಮಾ ಕಂಪನಿಗಳೊಂದಿಗೆ ಒಪ್ಪಂದ ಮಾಡಿಕೊಂಡಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಆಡಳಿತ ಮಂಡಳಿಗಳು ಶೇಕಡಾ ೧೦ರ ವಂತಿಗೆಯನ್ನು ಭರಿಸದಿದ್ದರೆ, ಸರ್ಕಾರವೇ ಈ ವಂತಿಗೆ ಭರಿಸಲು ಏನು ಕ್ರಮ ಕೈಗೊಳ್ಳಲಿದೆ ;

(ಉ) ಈ ರೀತಿ ಶೇಕಡಾ ೧೦ರ ವಂತಿಗೆಯನ್ನು ಆಡಳಿತ ಮಂಡಳಿಗಳ ಬದಲು ಸರ್ಕಾರ ಭರಿಸಲು ಉದ್ದೇಶಿಸಿದ್ದರೆ ಪ್ರತಿವರ್ಷ ತಗಲುವ ಅಂದಾಜು ವೆಚ್ಚವೆಷ್ಟು?

## ಪ್ರಾಥಮಿಕ ಶಾಲೆಯಿಂದ ಪದೋನ್ನತಿ ಪಡೆದ ಪ್ರೌಢಶಾಲೆ ಶಿಕ್ಷಕರ ಕುರಿತು

**ಶ್ರೀ ನಾರಾಯಣ ಸಾ ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೫ (೧೫೧೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಲ್ಲಿ ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಪದೋನ್ನತಿ ಹೊಂದಿ ಈಗ ಪ್ರೌಢ ಶಾಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; ಯಾರು ಯಾರು ಯಾವ ಪ್ರೌಢ ಶಾಲೆಯಲ್ಲಿ ಯಾವ ವಿಷಯದ ಶಿಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ;

(ಆ) ಪ್ರತಿಯೊಬ್ಬ ಶಿಕ್ಷಕರ ಪ್ರತಿ ಶಾಲಾವಾರು ಸಂಪೂರ್ಣ ವಿವರ ನೀಡುವುದು ?

## ವಿಶ್ವವಿದ್ಯಾನಿಲಯದ ಹುದ್ದೆಗಳ ಬಗ್ಗೆ

**ಶ್ರೀ ಗೋ. ಮಧುಸೂಧನ್ (ಪದವೀಧರರ ಕ್ಷೇತ್ರ) –**

೧೫೦ (೧೧೭೪) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯಾದ್ಯಂತ ಇರುವ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; (ವಿಶ್ವವಿದ್ಯಾನಿಲಯಗಳವಾರು ಬೋಧಕ, ಬೋಧಕೇತರ ವಿವರ ನೀಡುವುದು)

(ಆ) ಹಾಲಿ ಬೋಧಕ, ಬೋಧಕೇತರ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ, ಹಂಗಾಮಿ ಮತ್ತು ಗುತ್ತಿಗೆ ನೌಕರರ ಸಂಖ್ಯೆ ಎಷ್ಟು ; (ಹುದ್ದೆವಾರು ವಿಶ್ವವಿದ್ಯಾನಿಲಯವಾರು ವಿವರ ನೀಡುವುದು)

(ಇ) ಕಳೆದ ಐದು ವರ್ಷಗಳಲ್ಲಿ ಹಂಗಾಮಿ ಮತ್ತು ಗುತ್ತಿಗೆ ಆಧಾರದಲ್ಲಿ ನೇಮಕವಾದ ನೌಕರರ ಸಂಖ್ಯೆ ಎಷ್ಟು ; (ಹುದ್ದೆವಾರು ಮತ್ತು ವಿಶ್ವವಿದ್ಯಾನಿಲಯವಾರು ವಿವರ ನೀಡುವುದು)

(ಈ) ಹಂಗಾಮಿ ಮತ್ತು ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ನೀಡಲಾಗುತ್ತಿರುವ ಕನಿಷ್ಠ ಮತ್ತು ಗರಿಷ್ಠ ವೇತನ ಹಾಗೂ ನೀಡಲಾಗುತ್ತಿರುವ ಇತರೆ ಸೌಲಭ್ಯಗಳು ಏನು ? (ವಿಶ್ವವಿದ್ಯಾನಿಲಯವಾರು ವಿವರ ಒದಗಿಸುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

---

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500